# All India Radio: Bangalore
# Regional Bulletin In Kannada
# 16.01.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

**ಮುಖ್ಯಾಂಶಗಳು**

1. **ಮುಂದಿನ ಸಂಪುಟ ಸಭೆಯಲ್ಲಿ ಜಾತಿ ಗಣತಿ ವರದಿಯ ಮುಚ್ಚಿದ ಲಕೋಟೆ ತೆರೆಯಲು ನಿರ್ಧಾರ – ಕಾನೂನು ಸಚಿವ ಎಚ್.ಕೆ.ಪಾಟೀಲ್**
2. **ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ 3 ಸಾವಿರದ 352 ನೌಕರರಿಗೆ ವೈದ್ಯಕೀಯ ವಿಮಾ ಸೌಲಭ್ಯ ನೀಡಲು ಸಂಪುಟ ನಿರ್ಧಾರ**
3. **ಕೃಷಿ ಕ್ಷೇತ್ರದ ಒತ್ತಡ ಕಡಿಮೆ ಮಾಡಲು ತಾಂತ್ರಿಕ ನೆರವು, ಆರ್ಥಿಕ ಬೆಂಬಲ ಅಗತ್ಯ – ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್**
4. **ಕೇಂದ್ರ ಸರ್ಕಾರದ ಜನ ಗಣತಿಗೆ ರಾಜ್ಯ ಸರ್ಕಾರ ಸಹಕಾರ ನೀಡುವಂತೆ ಪ್ರತಿಪಕ್ಷ ನಾಯಕ ಆರ್.ಅಶೋಕ ಒತ್ತಾಯ**
5. **ಬೀದರ್‌ನಲ್ಲಿ ಗುಂಡಿನ ದಾಳಿಗೆ ಇಬ್ಬರು ಸಾವು: ಆರೋಪಿಗಳ ಶೀಘ್ರ ಬಂಧನಕ್ಕೆ ಸಚಿವ ಈಶ್ವರ್ ಖಂಡ್ರೆ ಸೂಚನೆ**

*****************

ಜಾತಿಗಣತಿ ವರದಿ ಮುಚ್ಚಿದ ಲಕೋಟೆಯಲ್ಲಿದ್ದು ಅದನ್ನು ತೆರೆಯುವ ಬಗ್ಗೆ ಮುಂದಿನ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಂಡ್ಯದಲ್ಲಿ ಕೃಷಿ ತೋಟಗಾರಿಕೆ ಕ್ರೋಡಿಕೃತ ವಿವಿ ಸ್ಥಾಪನೆ, ಕೃಷಿ ತೋಟಗಾರಿಕೆ ಕ್ರೋಡಿಕೃತ ವಿವಿ ಸ್ಥಾಪನೆ, 5ನೇ ರಾಜ್ಯ ಹಣಕಾಸು ಆಯೋಗದ ಅವಧಿ ವಿಸ್ತರಣೆ ಸೇರಿದಂತೆ 35 ವಿಷಯಗಳನ್ನು ಚರ್ಚೆ ಮಾಡಲಾಗಿದೆ ಎಂದು ಹೇಳಿದ್ದಾರೆ. ಪಡಿತರ ಚೀಟಿ ಇರುವವರಿಗೆ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಉಚಿತ ಎಂಆರ್‌ಐ ಸ್ಕ್ಯಾನ್, ಸಿಟಿ ಸ್ಕ್ಯಾನ್‌ಗೂ ಅವಕಾಶ ಕಲ್ಪಿಸುವಂತೆ ಸಂಪುಟದಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಬಿಬಿಎಂಪಿ ವ್ಯಾಪ್ತಿಯ ಆರೋಗ್ಯ ಕೇಂದ್ರ ಮೇಲ್ದರ್ಜೆಗೆ ಏರಿಸಲು 413 ಕೋಟಿ ರೂಪಾಯಿಗೆ ಅನುಮೋದನೆ ನೀಡಲಾಗಿದೆ. ಮಹಾನಗರ ಪಾಲಿಕೆಯ ಒಟ್ಟು 13 ಹೆರಿಗೆ ಆಸ್ಪತ್ರೆಗಳು ಮೇಲ್ದರ್ಜೆಗೆ ಏರಿಸುವುದು 10 ಮಹಾನಗರ ಪಾಲಿಕೆ, 24 ನಗರಪಾಲಿಕೆಗಳಲ್ಲಿ ಒಂದು ಚಿತಾಗಾರಕ್ಕೆ 4 ಕೋಟಿ ರೂಪಾಯಿ ವೆಚ್ಚದಂತೆ 126 ಕೋಟಿ ರೂ ವೆಚ್ಚದಲ್ಲಿ ಚಿತಾಗಾರ ನಿರ್ಮಾಣಕ್ಕೆ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

*****************

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಕಾರ್ಯಗತಗೊಳಿಸುತ್ತಿರುವ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ 3 ಸಾವಿರದ 352 ಸಿಬ್ಬಂದಿಗೆ ಸಾಮೂಹಿಕ ವೈದ್ಯಕೀಯ ವಿಮೆ ಸೌಲಭ್ಯ ಒದಗಿಸಲು ಇಂದಿನ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಇದಕ್ಕಾಗಿ ವಾರ್ಷಿಕ 8 ಕೋಟಿ 34 ಲಕ್ಷ ರೂಪಾಯಿ ವೆಚ್ಚ ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಮುಂದಿನ 3 ವರ್ಷಗಳಲ್ಲಿ ಈ ಯೋಜನೆ ಜಾರಿಗೊಳಿಸಲು ಅಂದಾಜು 2 ಸಾವಿರದ 514 ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದು ತಿಳಿಸಿದ್ದಾರೆ.

*****************

ದೇಶಾದ್ಯಂತ ಕೃಷಿ ವಲಯಕ್ಕೆ ಉತ್ತೇಜನ ನೀಡಲು ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಕೃಷಿ ವಿಶ್ವವಿದ್ಯಾಲಯಗಳು ಸಕ್ರೀಯವಾಗಿ ಕಾರ್ಯನಿರ್ವಹಿಸಬೇಕೆಂದು ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ ನೀಡಿದ್ದಾರೆ.

ಧಾರವಾಡ ಕೃಷಿ ವಿಶ್ವ ವಿದ್ಯಾಲಯ ಅಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೃಷಿ ಕ್ಷೇತ್ರದ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ತಾಂತ್ರಿಕ ನೆರವು, ಆರ್ಥಿಕ ಬೆಂಬಲ ಹಾಗೂ ಮೌಲ್ಯವರ್ಧನೆಯ ಅಗತ್ಯವಿದೆ ಎಂದು ಹೇಳಿದ್ದಾರೆ.

ಇದೇ ವೇಳೆ, ಕೃಷಿ ಆಧಾರಿತ ಕೈಗಾರಿಕೆಗಳು ರೈತರ ಕಲ್ಯಾಣ ಹಾಗೂ ಕೃಷಿ ಕ್ಷೇತ್ರದ ಸಂಶೋಧನೆಗಾಗಿ ಸಿಎಸ್‌ಆರ್ ನಿಧಿ ನೆರವು ನೀಡುವಂತೆ ತಿಳಿಸಿದ್ದಾರೆ.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮಾತನಾಡಿ ಕೃಷಿ ವಿಶ್ವವಿದ್ಯಾಲಯಗಳು ದೇಶದ ಕೃಷಿ ಕ್ಷೇತ್ರ ಅಭಿವೃದ್ಧಿಗೆ ಸಹಕಾರಿಯಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಮಾತನಾಡಿದ ಸಚಿವ ಪ್ರಲ್ಹಾದ್ ಜೋಶಿ, ಧಾರವಾಡ ವಿಶ್ವವಿದ್ಯಾಲಯದಲ್ಲಿ ರೈತರಿಗೆ ಅನುಕೂಲವಾಗಲು ಹವಾಮಾನ ಸಂಶೋಧನಾ ಕೇಂದ್ರ ಸ್ಥಾಪಿಸಲು ಚಿಂತಿಸಲಾಗಿದೆ ಎಂದು ಹೇಳಿದ್ದಾರೆ.

*****************

ನ್ಯೂಕ್ಲಿಯರ್ ಶಕ್ತಿಗಿಂತ ಆಧ್ಯಾತ್ಮಿಕ ಶಕ್ತಿ ದೊಡ್ಡದು ಎಂದು ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಅಭಿಪ್ರಾಯಪಟ್ಟಿದ್ದಾರೆ. ನಂಬಿಕೆ, ಜ್ಞಾನ, ಆಧ್ಯಾತ್ಮದ ಪ್ರತಿರೂಪವಾದ ಜೈನ ಧರ್ಮ ಸುಮೇರು ಪರ್ವತ ಧಾರ್ಮಿಕತೆಯ ಮೇರು ಪರ್ವತವಾಗಿದೆ ಎಂದು ಹೇಳಿದ್ದಾರೆ. ಹುಬ್ಬಳ್ಳಿ ವರೂರಿನಲ್ಲಿ ಇಂದು ನಡೆದ ವಿಶ್ವದ ಅತೀ ಎತ್ತರದ 405 ಅಡಿ ಎತ್ತರದ ಸುಮೇರು ಪರ್ವತ ಜಿನ ಬಿಂಬಗಳ ಪಂಚ ಕಲ್ಯಾಣಕ ಪ್ರತಿಷ್ಠಾ ಮಹಾ ಮಹೋತ್ಸವದಲ್ಲಿ ಮಾತನಾಡಿದ ಅವರು, ಮಠ – ಮಂದಿರ ಕೇವಲ ಧಾರ್ಮಿಕ ಕೇಂದ್ರಗಳಲ್ಲ ಎಂದು ತಿಳಿಸಿದ್ದಾರೆ.

*****************

ಕಾಂಗ್ರೆಸ್‌ನಲ್ಲಿ ಕುರ್ಚಿಗಾಗಿ ಕಿತ್ತಾಟ ನಡೆಯುತ್ತಿರುವುದರಿಂದ ಜನರ ಪಾಲಿಗೆ ಸರ್ಕಾರದ ನೆರವು ಮರೀಚಿಕೆಯಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡೂವರೆ ವರ್ಷಕ್ಕೆ ಅಧಿಕಾರ ಹಸ್ತಾಂತರವಾಗಬೇಕೆಂದು ಒಪ್ಪಂದವಾದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಧಿಕಾರ ಹಸ್ತಾಂತರಿಸಲು ಮನಸ್ಸಿಲ್ಲ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಜನಗಣತಿ ನಡೆಸುತ್ತಿರುವಾಗ ಕಾಂಗ್ರೆಸ್ ಸರ್ಕಾರ ಜಾತಿ ಗಣತಿ ವರದಿಯ ಬಗ್ಗೆ ಮಾತಾಡುತ್ತಿದೆ ಎಂದು ದೂರಿದ್ದಾರೆ. ಎಲ್ಲ ಯೋಜನೆಗಳಿಗೆ ಕೇಂದ್ರ ಸರ್ಕಾರದ ಜನಗಣತಿ ವರದಿಯನ್ನು ಮಾನದಂಡವಾಗಿ ಪರಿಗಣಿಸಲಾಗುತ್ತದೆ. ಆದ್ದರಿಂದ ರಾಜ್ಯ ಸರ್ಕಾರ ಕೇಂದ್ರದ ಜನಗಣತಿಗೆ ಸಹಕಾರ ನೀಡಬೇಕು ಎಂದು ತಿಳಿಸಿದ್ದಾರೆ.

*****************

ಬೀದರ್‌ನ ಭಾರತೀಯ ಸ್ಟೇಟ್ ಬ್ಯಾಂಕ್ ಬಳಿ ಇಂದು ಹಾಡಹಗಲೇ ದುಷ್ಕರ್ಮಿಗಳು ಗುಂಡಿನ ದಾಳಿ ನಡೆಸಿ ಇಬ್ಬರು ಸಿಬ್ಬಂದಿ ಹತ್ಯೆಗೈದು ದರೋಡೆ ಮಾಡಿದ್ದಾರೆ. ಘಟನೆ ಬಗ್ಗೆ ಆಘಾತ ವ್ಯಕ್ತಪಡಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಆರೋಪಿಗಳ ಬಂಧನಕ್ಕೆ ತುರ್ತು ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುಂಡಿನ ದಾಳಿಯಲ್ಲಿ ಇಬ್ಬರು ಮೃತಪಟ್ಟಿರುವುದು ನೋವಿನ ಸಂಗತಿಯಾಗಿದೆ. ಗೃಹ ಸಚಿವ ಡಾ. ಜಿ ಪರಮೇಶ್ವರ್, ಬೀದರ್ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮಾತನಾಡಿದ್ದು, ಕೂಡಲೇ ದುಷ್ಕರ್ಮಿಗಳನ್ನು ಬಂಧಿಸುವಂತೆ ಸೂಚಿಸಿದ್ದಾರೆ.

*****************

ಬೆಂಗಳೂರಿನಲ್ಲಿ ಅಮೆರಿಕದ ದೂತವಾಸ ಕಚೇರಿ ನಾಳೆ ಉದ್ಘಾಟನೆಗೊಳ್ಳಲಿದೆ. ಭಾರತದಲ್ಲಿನ ಅಮೆರಿಕದ ರಾಯಭಾರಿ ಎರಿಕ್ ಗಾರ್ಸೆಟ್ ರಾಯಭಾರ ಕಚೇರಿಯನ್ನು ಉದ್ಘಾಟಿಸಲಿದ್ದಾರೆ. ಜೆಡಬ್ಲ್ಯೂ ಮ್ಯಾರಿಯೇಟ್ ಹೋಟೇಲ್‌ನಲ್ಲಿ ದೂತವಾಸ ಕಚೇರಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸಲಿದ್ದು, ಬಳಿಕ ಶಾಶ್ವತ ಕಚೇರಿಗೆ ಸ್ಥಳಾಂತರ ಗೊಳ್ಳಲಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ಅವರು, ಇದನ್ನು ಸಾಧ್ಯವಾಗಿಸಿದ ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರನ್ನು ಶ್ಲಾಘಿಸಿದ್ದಾರೆ.

*****************

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಕೊರ್ಲಹಳ್ಳಿ ಬಳಿ ತುಂಗಭದ್ರಾ ನೀರು ಹಸಿರು ಬಣ್ಣಕ್ಕೆ ತಿರುಗಿದ್ದು ಸುತ್ತಲಿನ ಜನರ ಆತಂಕಕ್ಕೆ ಕಾರಣವಾಗಿದೆ. ಜಿಲ್ಲಾಧಿಕಾರಿಗಳು ಕೂಡಲೇ ನೀರನ್ನು ತಪಾಸಣೆಗೆ ಕಳುಹಿಸಿಕೊಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ನದಿಯ ನೀರನ್ನು ಜನ ಜಾನುವಾರುಗಳಿಗೆ ಬಳಸದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳು ತಕ್ಷಣ ಕಾರ್ಯಪ್ರವೃತ್ತರಾಗಬೇಕು ಎಂದು ಸೂಚಿಸಿದ್ದಾರೆ.

ಇದೇ ವೇಳೆ ಬೀದರ್‌ನಲ್ಲಿ ಇಂದು ನಡೆದ ಗುಂಡಿನ ದಾಳಿ ಕುರಿತಂತೆ ಪ್ರತಿಕ್ರಿಯಿಸಿ, ಅಪರಾಧಿಗಳಿಗೆ ಭಯವೇ ಇಲ್ಲದಂತಾಗಿದೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

*****************

ಬಡವರ ಪಾಲಿಗೆ ಗ್ಯಾರೆಂಟಿ ಯೋಜನೆಗಳು ಸಹಕಾರಿಯಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಬೆಂಗಳೂರಿನ ಗಾಂಧಿನಗರ ವಿಧಾನಸಭಾ ಕ್ಷೇತ್ರದ ಶಾಸಕರ ಕಛೇರಿಯಲ್ಲಿ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಹಸಿವಿನಿಂದ ಯಾರು ಮಲಗಬಾರದು ಎಂದು ಸರ್ಕಾರ ಜಾರಿಗೆ ತಂದ ಅನ್ನಭಾಗ್ಯ ಯೋಜನೆ ಬಡವರ ಪಾಲಿಗೆ ಅಕ್ಷಯಪಾತ್ರೆಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಮತ್ತು ಗೃಹಲಕ್ಷ್ಮಿ ಯೋಜನೆಯಿಂದ ಸ್ವಾವಲಂಭಿ ಬದುಕು ಸಾಗಿಸಲು ಅನುಕೂಲವಾಗಿದೆ ಎಂದು ಹೇಳಿದ್ದಾರೆ.

*****************

2025ರ ವೇಳೆಗೆ ದೇಶದಾದ್ಯಂತ ಟಿಬಿ ರೋಗವನ್ನು ತೊಡೆದು ಹಾಕುವ ನಿಟ್ಟಿನಲ್ಲಿ ನಿಕ್ಷಯ್ ಪೋಷಣ್ ಅಭಿಯಾನ ಆರಂಭವಾಗಿದೆ.

ಈ ಯೋಜನೆಯಡಿಯಲ್ಲಿ ಟಿಬಿ ರೋಗಿಗಳಿಗೆ ಪೌಷ್ಟಿಕ ಆಹಾರ ಒದಗಿಸುವ ಭಾಗವಾಗಿ ಪ್ರತಿ ತಿಂಗಳು ಒಂದು ಸಾವಿರ ರೂಪಾಯಿಗಳನ್ನು ಅವರ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತದೆ ಎಂದು **ವಿಜಯನಗರ** ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಂಕರ್ ನಾಯಕ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ದುಶ್ಚಟಗಳಿಂದ ದೂರವಿದ್ದು, ಆದರ್ಶ ಬದುಕು ಕಟ್ಟಿಕೊಳ್ಳುವ ಮೂಲಕ ಕ್ಷಯ ಮುಕ್ತ ಭಾರತ ನಿರ್ಮಿಸಿ ಎಂದು **ಚಿತ್ರದುರ್ಗ** ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಕರೆ ನೀಡಿದ್ದಾರೆ. ಟಿಬಿ ರೋಗವು ಒಂದು ಮಾರಣಾಂತಿಕ ಕಾಯಿಲೆಯಾಗಿದ್ದು, ಭಾರತದ ಸಾರ್ವಜನಿಕ ಆರೋಗ್ಯ ಸಮಸ್ಯೆಗಳಲ್ಲಿ ಒಂದಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಹಾಗೂ ಎಲ್ಲೆಂದರಲ್ಲಿ ಉಗುಳುವುದನ್ನು ನಿಲ್ಲಿಸಬೇಕು ಎಂದು ತಿಳಿಸಿದ್ದಾರೆ.

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ, **'ಮನ್ ಕಿ ಬಾತ್'** ಮೂಲಕ, ಈ ತಿಂಗಳ 3ನೇ ಭಾನುವಾರ, 19 ರಂದು, ಬೆಳಗ್ಗೆ 11 ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ.

*********ಮುಕ್ತಾಯ********